ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: **560(581)**
ಉತ್ತರಿಸುವ ದಿನಾಂಕ	: **10.03.2020**
ಸದಸ್ಯರ ಹೆಸರು	: ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವವರು	: ಗಣಿ ಮತ್ತು ಭೂವಿಜ್ಞಾನ ಸಚಿವರು

ಪ್ರಶ್ನೆ ಸಂಖ್ಯೆ	ಪ್ರಶ್ನೆಗಳು	ಉತ್ತರಗಳು
ಅ)	ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣ ಕುರಿತು ವಿಶೇಷ ತನಿಖಾ ತಂಡದಿಂದ ಕ್ರಿಮಿನಲ್ ಪ್ರಕರಣ ದಾಖಲಾಗಿರುವ ಎಷ್ಟು ಐ.ಎ.ಎಸ್. ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಈ ಪ್ರಕರಣದಲ್ಲಿ ಭಾಗಿಯಾಗಿರುವ ಐ.ಪಿ.ಎಸ್. ಅಧಿಕಾರಿಗಳ ಸಂಖ್ಯೆ ಎಷ್ಟು; ಇವರ ಮೇಲೆ ಕ್ರಿಮಿನಲ್ ಪ್ರಕರಣ ಯಾವ ದಿನಾಂಕದಂದು ದಾಖಲಾಗಿದೆ;	ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಶ್ರೀ ಗಂಗಾರಾಂ ಬಡೇರಿಯಾ ಐ.ಎ.ಎಸ್. ಅಂದಿನ ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಇವರನ್ನು ವಿಶೇಷ ತನಿಖಾ ತಂಡ, ಕರ್ನಾಟಕ ಲೋಕಾಯುಕ್ತ ಇವರು ದಿನಾಂಕ: 15.05.2017 ರಂದು ಬಂಧಿಸಿದ್ದರ ಹಿನ್ನೆಲೆಯಲ್ಲಿ ಅಧಿಕಾರಿಯವರನ್ನು ದಿನಾಂಕ:19.05.2017 ರಂದು ಅಮಾನತ್ತುಗೊಳಿಸಿ ದಿನಾಂಕ:28.10.2017 ರಲ್ಲಿ ಅಧಿಕಾರಿಯವರನ್ನು ಮತ್ತೆ ಸೇವೆಯಲ್ಲಿ ಪುನರ್ ಸ್ಥಾಪಿಸಲಾಗಿರುತ್ತದೆ. ಸದರಿ ಅಧಿಕಾರಿಯವರ ಮೇಲೆ ದಿನಾಂಕ:13.03.2015 ರಂದು ಮೊಕದ್ದಮೆ ಸಂಖ್ಯೆ: 10/2015 ರನ್ವಯ ಕ್ರಿಮಿನಲ್ ಪ್ರಕರಣ ದಾಖಲಾಗಿರುತ್ತದೆ. ಈ ಪ್ರಕರಣದಲ್ಲಿ ಯಾವುದೇ ಐ.ಪಿ.ಎಸ್. ಅಧಿಕಾರಿಗಳು ಭಾಗಿಯಾಗಿರುವುದಿಲ್ಲ.
ಆ)	ಐ.ಎ.ಎಸ್. ಮತ್ತು ಐ.ಪಿ.ಎಸ್. ಅಧಿಕಾರಿಗಳ ಮೇಲೆ ದಾಖಲಾಗಿರುವ ಕ್ರಿಮಿನಲ್ ಪ್ರಕರಣದ ಕುರಿತು ತನಿಖೆ ನಡೆಸಲು ಅನುಮತಿ ನೀಡಲಾಗಿದೆ; ಅನುಮತಿ ನೀಡುವಂತೆ ಕೋರಿ ವಿಶೇಷ ತನಿಖಾ ತಂಡದಿಂದ ಸರ್ಕಾರಕ್ಕೆ ಎಂದು ಮನವಿ ಸಲ್ಲಿಸಲಾಗಿದೆ; ಇನ್ನು ನೀಡಿಲ್ಲದಿದ್ದಲ್ಲಿ, ಯಾವಾಗ ನೀಡಲಾಗುವುದು;	ಐ.ಎ.ಎಸ್. ಅಧಿಕಾರಿಗಳ ಮೇಲೆ ದಾಖಲಾಗಿರುವ ಕ್ರಿಮಿನಲ್ ಪ್ರಕರಣದ ಕುರಿತು ವಿಶೇಷ ತನಿಖಾ ತಂಡದಿಂದ ತನಿಖೆ ನಡೆಸಲು ಇಲಾಖೆಯು ಅನುಮತಿ ನೀಡಿರುವುದಿಲ್ಲ. ಶ್ರೀ ಗಂಗಾರಾಂ ಬಡೇರಿಯಾ ಐ.ಎ.ಎಸ್. ಅಂದಿನ ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ರವರ ವಿರುದ್ಧ ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ದೋಷರೋಪಣಾ ಪಟ್ಟಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಲು Criminal Procedure Code-1973, Sec-197 ಹಾಗೂ Prevention of Corruption Act-1998, Sec-19 ರ ಪ್ರಕಾರ ಅಭಿಯೋಜನಾ ಮಂಜೂರಾತಿ ಆದೇಶವನ್ನು ನೀಡಬೇಕೆಂದು ವಿಶೇಷ ತನಿಖಾ ತಂಡ, ಕರ್ನಾಟ ಲೋಕಾಯುಕ್ತ ಇವರ ದಿನಾಂಕ: 17.10.2017ರ ಪತ್ರದಲ್ಲಿ ಹಾಗೂ ಪರಿಷ್ಕೃತ ವರದಿ 05.03.2019ರ ಪತ್ರದಲ್ಲಿ ಸಿ.ಆ.ಸಿ.ಇಲಾಖೆಯು ಕೋರಿರುತ್ತದೆ. ಈ ಬಗ್ಗೆ ಆಡಳಿತ ಇಲಾಖೆಯ ನಿರ್ಧಿಷ್ಟ ಅಭಿಪ್ರಾಯದೊಂದಿಗೆ ವರದಿಯನ್ನು ಸಲ್ಲಿಸುವಂತೆ ಸಿ.ಆ.ಸು.ಇಲಾಖೆಯು ಕೋರಿದ್ದು, ಅಭಿಪ್ರಾಯ / ವರದಿಯನ್ನು ಸಲ್ಲಿಸುವುದರ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಇ)	ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣದ ಅಕ್ರಮದಲ್ಲಿ ಭಾಗಿಯಾಗಿರುವ ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)	**ಜಂತಕಲ್** ಅಕ್ರಮ ಗಣಿಗಾರಿಕೆ ಪ್ರಕರಣ ಸಂಬಂಧ ಶ್ರೀ ಗಂಗಾರಾಂ ಬಡೇರಿಯಾ, ಭಾ.ಆ.ಸೇ., ಹಿಂದಿನ ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಇವರ ವಿರುದ್ಧ ಈ ಹಿಂದೆ ಸರ್ಕಾರದ ಹಂತದಲ್ಲಿ ಇಲಾಖಾ ವಿಚಾರಣೆಯನ್ನು ಪ್ರಾರಂಭಿಸಿ ವಿಚಾರಣಾಧಿಕಾರಿಯವರು ದಿನಾಂಕ:21.09.2015 ರಂದು ವಿಚಾರಣಾ ವರದಿಯನ್ನು ಸಲ್ಲಿಸಿರುತ್ತಾರೆ. ಈ ವರದಿಯನ್ನು ಸರ್ಕಾರವು ಅಂಗೀಕರಿಸಿ, ಅಧಿಕಾರಿಯವರನ್ನು ಆರೋಪ ಮುಕ್ತರನ್ನಾಗಿಸಿ ಅವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಮುಕ್ತಾಯಗೊಳಿಸಲು ನಿರ್ಣಯಿಸಿ, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 538 ಸಿಅಸೆ 2011, ದಿನಾಂಕ:09.02.2017ನ್ನು ಹೊರಡಿಸಲಾಗಿರುತ್ತದೆ. ತದನಂತರ ವಿಶೇಷ ತನಿಖಾ ತಂಡ (Special Investigation Team) ದಿಂದ ಸದರಿ ಅಧಿಕಾರಿಯ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಲಾಗಿದ್ದು, ಸದರಿ ಪ್ರಕರಣ ಪ್ರಗತಿಯಲ್ಲಿದೆ.
ಈ)	ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಅಕ್ರಮವೆಸಗಲು ಐ.ಎ.ಎಸ್. ಅಧಿಕಾರಿಯ ಪುತ್ರನ ಬ್ಯಾಂಕ್ ಖಾತೆಗೆ 20 ಲಕ್ಷ ಪಾವತಿಸಲಾಗಿದೆ ಎಂಬುದರ ಕುರಿತು ಸರ್ಕಾರದ ನಿಲುವೇನು?	ಸದರಿ ಐ.ಎ.ಎಸ್ ಅಧಿಕಾರಿಯ ಪುತ್ರನ ವಿರುದ್ಧ ಮಾನ್ಯ ನ್ಯಾಯಾಲಯದಲ್ಲಿ ಕರ್ನಾಟಕ ಲೋಕಾಯುಕ್ತ, ವಿಶೇಷ ತನಿಖಾ ತಂಡ ಇವರಿಂದ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲಾಗಿರುತ್ತದೆ.

ಸಂಖ್ಯೆ: ಸಿಐ 13 ಎಂಪಿಪಿ 2020

(ಸಿ.ಸಿ. ಪಾಟೀಲ)
ಗಣಿ ಮತ್ತು ಭೂ ವಿಜ್ಞಾನ ಸಚಿವರು.